## 5. ಕೇರಳ: ಏಕಕಾಲದಲ್ಲಿ 50 ಸಾವಿರ ಮಂದಿಗೆ ಚಿಕಿತ್ಸೆ

ದೇಶದಲ್ಲೇ ಮೊದಲ ಕೊರೋನಾ ಸೋಂಕನ್ನು ಕಂಡಿದ್ದ ಕೇರಳದಲ್ಲಿ ಈಗ ಮೂರನೇ ಹಂತದ ವ್ಯಾಪಿಸುವಿಕೆ ಆರಂಭವಾಗಿದ್ದು, ಅದನ್ನು ಎದುರಿಸಲು ರಾಜ್ಯ ಸಕಲ ಸಿದ್ಧತೆ ನಡೆಸಿದೆ. ಅದರಂತೆ, ಏಕಕಾಲಕ್ಕೆ 50 ಸಾವಿರ ಸೋಂಕಿತರಿಗೆ ಚಿಕಿತ್ಸೆ ನೀಡುವಂಥ ವ್ಯವಸ್ಥೆಯನ್ನು ಆರಂಭಿಸಲಾಗಿದೆ. ಇದಕ್ಕಾಗಿ ಮೊದಲ ಹಂತದ ಚಿಕಿತ್ಸಾ ಕೇಂದ್ರಗಳ ಸಂಖ್ಯೆಯನ್ನು 56ಕ್ಕೇರಿಸಲು ಸರ್ಕಾರ ನಿರ್ಧರಿಸಿದೆ.

ಆರಂಭದಲ್ಲಿ ಸೋಂಕಿನ ವ್ಯಾಪಿಸುವಿಕೆಗೆ ಕಡಿವಾಣ ಹಾಕುವಲ್ಲಿ ಯಶಸ್ವಿಯಾಗಿದ್ದ ಕೇರಳದಲ್ಲಿ ಮೇ ತಿಂಗಳಿನಿಂದಿಚೇಗೆ ಮತ್ತೆ ಸೋಂಕಿತರ ಸಂಖ್ಯೆಯಲ್ಲಿ ಏರಿಕೆ ಕಂಡಿದೆ. ಕಳೆದ 2 ತಿಂಗಳಲ್ಲಿ ಸುಮಾರು 7 ಸಾವಿರದಷ್ಟು ಹೊಸ ಪ್ರಕರಣಗಳು ಪತ್ತೆಯಾಗಿವೆ. ಮುಂದಿನ ತಿಂಗಳಲ್ಲಿ ಇವುಗಳ ಸಂಖ್ಯೆ ಇನ್ನಷ್ಟು ಏರಿಕೆಯಾಗುವ ಭೀತಿಯಿದ್ದರೂ, ಯಾವುದೇ ಪರಿಸ್ಥಿತಿಯನ್ನೂ ಎದುರಿಸಲು ಸರ್ಕಾರ ಸನ್ನದ್ಧವಾಗಿದೆ ಎಂದು ರಾಜ್ಯ ಆರೋಗ್ಯ ಸಚಿವ ಕೆ.ಕೆ.ಶೈಲಜಾ ಹೇಳಿದ್ದಾರೆ.

ಈಗಾಗಲೇ ಇದ್ದ ಕೊರೋನಾ ಚಿಕಿತ್ಸಾ ಕೇಂದ್ರಗಳ ಸಂಖ್ಯೆ ದ್ವಿಗುಣಗೊಳಿಸಲಾಗಿದ್ದು, ತಾತ್ಕಾಲಿಕವಾಗಿ ಹೆಚ್ಚುವರಿ ಆರೋಗ್ಯ ಸಿಬ್ಬಂದಿಯನ್ನು ನೇಮಕ ಮಾಡಲು ಸರ್ಕಾರ ಮುಂದಾಗಿದೆ. ಈ ಪ್ರಕ್ರಿಯೆ ಪೂರ್ಣಗೊಂಡರೆ ಏಕಕಾಲಕ್ಕೆ 50 ಸಾವಿರ ಕೊರೋನಾ ಸೋಂಕಿತರಿಗೆ ಚಿಕಿತ್ಸೆ ನೀಡಬಹುದಾಗಿದೆ. ಈಗಾಗಲೇ ರಾಜ್ಯದ ಪ್ರತಿ ಜಿಲ್ಲೆಯಲ್ಲೂ 2 ಕೊರೋನಾ ಆಸ್ಪತ್ರೆಗಳಿವೆ. ಪ್ರತಿ ಆಸ್ಪತ್ರೆಯಲ್ಲೂ ಒಂದೊಂದು ಎಫ್‌ಎಲ್‌ಟಿಸಿ (ಮೊದಲ ಚಿಕಿತ್ಸಾ ಕೇಂದ್ರ) ತೆರೆಯಲಾಗಿದೆ. ಅದರಂತೆ, ಒಟ್ಟಾರೆ ಈಗ 28 ಚಿಕಿತ್ಸಾ ಕೇಂದ್ರಗಳಿದ್ದು, ಈ ಸಂಖ್ಯೆಯನ್ನು 56ಕ್ಕೇರಿಸಲು ಸರ್ಕಾರ ನಿರ್ಧರಿಸಿದೆ. ಅಂದರೆ, ಪ್ರತಿ ಆಸ್ಪತ್ರೆಯಲ್ಲೂ 2 ಎಫ್‌ಎಲ್‌ಟಿಸಿಗಳು ಕಾರ್ಯನಿರ್ವಹಿಸಲಿವೆ.

ಆಧಾರ:ಉದಯವಾಣಿ, ದಿನಾಂಕ:21.07.2020